# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 848 (832) |
| ಮಾನ್ಯ ಸದಸ್ಯರ ಹೆಸರು | ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 15.12.2025 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮೀಣ ಪ್ರದೇಶಗಳಲ್ಲಿ ಆರೋಗ್ಯ ಸೇವೆಗಳ ಅಗತ್ಯಗಳು ಮತ್ತು ಮೂಲಸೌಕರ್ಯ ಪೂರೈಸಲು ಸರ್ಕಾರವು ಸೌಲಭ್ಯ ವಂಚಿತ ಜಿಲ್ಲೆಗಳಲ್ಲಿ 500 ಹಾಸಿಗೆಗಳ ಬಹು ಶಿಸ್ತೀಯ ಸುಸಜ್ಜಿತ ಆಸ್ಪತ್ರೆಗಳನ್ನು ಸ್ಥಾಪಿಸಲು ಯೋಜಿಸಿದೆಯೇ; | ರಾಜ್ಯದ 12 ಜಿಲ್ಲೆಗಳಲ್ಲಿ ಹಾಗೂ ಬೆಂಗಳೂರಿನ ಪ್ರಮುಖ 03 ಆಸ್ಪತ್ರೆಗಳು ಸೇರಿ 15 ಆಸ್ಪತ್ರೆಗಳು 400 ರಿಂದ 450 ಹಾಸಿಗೆಗಳ ಆಸ್ಪತ್ರೆಯಾಗಿ ಕಾರ್ಯನಿರ್ವಹಿಸುತ್ತಿವೆ.<br>ವಿವರಗಳನ್ನು **ಅನುಬಂಧ-1ರಲ್ಲಿ ನೀಡಲಾಗಿದೆ.**<br><br>ದ್ವಿತೀಯ ಹಂತದ ಸೇವೆಗಳನ್ನು ಹಾಗೂ ತೃತೀಯ ಹಂತದ ಕೆಲವೊಂದು ಸೇವೆಗಳನ್ನು ನೀಡಲು ಪ್ರತಿ ಜಿಲ್ಲೆಯಲ್ಲಿ 400 ರಿಂದ 450 ಹಾಸಿಗೆಗಳ ಸುಸಜ್ಜಿತ ಜಿಲ್ಲಾಸ್ಪತ್ರೆಗಳು, ತಾಯಿ ಮತ್ತು ಮಕ್ಕಳ ಆಸ್ಪತ್ರೆಯೊಂದಿಗೆ ಕಾರ್ಯನಿರ್ವಹಿಸುತ್ತಿವೆ.<br><br>ಗ್ರಾಮೀಣ ಪ್ರದೇಶಗಳಲ್ಲಿ ಪ್ರಾಥಮಿಕ ಆರೋಗ್ಯ ಸೇವೆಗಳನ್ನು ನೀಡಲು ಉಪಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ ಪರಿಕಲ್ಪನೆಯಲ್ಲಿ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆ.<br><br>ರಾಜ್ಯದಲ್ಲಿ ವೆನ್‌ಲಾಕ್ ಜಿಲ್ಲಾ ಆಸ್ಪತ್ರೆ, ಮಂಗಳೂರು ಮತ್ತು ಚಿಗಟೇರಿ ಜಿಲ್ಲಾ ಆಸ್ಪತ್ರೆ, ದಾವಣಗೆರೆ 500 ಹಾಸಿಗೆಗಳಿಗಿಂತ ಹೆಚ್ಚಿನ ಹಾಸಿಗೆಗಳ ಆಸ್ಪತ್ರೆಯಾಗಿ ಕಾರ್ಯನಿರ್ವಹಿಸುತ್ತಿವೆ.<br><br>ಜಿಲ್ಲಾಸ್ಪತ್ರೆಗಳು ಸರ್ಕಾರಿ ವೈದ್ಯಕೀಯ ಕಾಲೇಜುಗಳಿಗೆ ಬೋಧನಾ ಆಸ್ಪತ್ರೆಯಾಗಿ ಹಸ್ತಾಂತರವಾಗಿದ್ದು, ಹೆಚ್ಚುವರಿ ಹಾಸಿಗೆಗಳನ್ನು ವೈದ್ಯಕೀಯ ಶಿಕ್ಷಣ ಇಲಾಖೆಯಿಂದ ನೀಡಲಾಗಿದೆ. |
| (ಆ) | ಸೇವಾ ವಿತರಣೆಯನ್ನು ಹೆಚ್ಚಿಸಲು ಜಿಲ್ಲಾ ಆಸ್ಪತ್ರೆಗಳು ಆಸ್ಪತ್ರೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಹತ್ತಿರದ ವೈದ್ಯಕೀಯ ಕಾಲೇಜುಗಳೊಂದಿಗೆ ಸಂಪರ್ಕಿಸಲು ಯಾವುದೇ ಯೋಜನೆಯನ್ನು ಪ್ರಾರಂಭಿಸಲಾಗಿದೆಯೇ; | ಸೇವಾ ವಿತರಣೆಯನ್ನು ಹೆಚ್ಚಿಸಲು ವೈದ್ಯಕೀಯ ಕಾಲೇಜುಗಳಿಗೆ ಗ್ರಾಮೀಣ ಸೇವೆಗಳಿಗಾಗಿ 03 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಗುರುತಿಸಿ ಅಲ್ಲಿ ವೈದ್ಯಕೀಯ ವಿದ್ಯಾರ್ಥಿಗಳಿಗೆ ಗ್ರಾಮೀಣ ಕ್ಷೇತ್ರ ತರಬೇತಿ ನೀಡಲು ಕ್ರಮವಹಿಸಲಾಗಿದೆ. ಆದೇಶ ಸಂಖ್ಯೆ ಆಕುಕ 206 ಸಿಜಿಎಂ 2023ರ Arogya Bandhu Scheme, Amendments to the existing 2016 guidelines dated:24.03.2025ರನ್ವಯ ವೈದ್ಯಕೀಯ ಕಾಲೇಜುಗಳಿಗೂ ಕೂಡ ಪ್ರಾಥಮಿಕ ಆರೋಗ್ಯ ಕೇಂದ್ರ , ಸಮುದಾಯ ಆರೋಗ್ಯ ಕೇಂದ್ರ ಮತ್ತು ತಾಲ್ಲೂಕು ಆಸ್ಪತ್ರೆಗಳನ್ನು ಷರತ್ತಿಗೊಳಪಟ್ಟು ನಿರ್ವಹಣೆ ಮಾಡಲು ಅವಕಾಶ ಕಲ್ಪಿಸಲಾಗಿದೆ. |
| (ಇ) | ತೃತೀಯ ಹಂತದ ಆರೋಗ್ಯ ರಕ್ಷಣೆಗಾಗಿ ಆಯುಷ್ಮಾನ್ ಭಾರತ್ ವಿಮಾ ಕಾರ್ಯಕ್ರಮದಡಿಯಲ್ಲಿ ಅರ್ಹ ನಾಗರೀಕರ ದಾಖಲಾತಿಯನ್ನು ಸಾಧಿಸಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ; | ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ್ ಆರೋಗ್ಯ ಯೋಜನಾ ಮುಖ್ಯ ಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆಯು ಆರೋಗ್ಯ ಭರವಸೆ ಯೋಜನೆಯಾಗಿರುತ್ತದೆ.<br><br>ಸದರಿ ಯೋಜನೆಯಡಿ 934 ತೃತೀಯ ಹಂತದ ಚಿಕಿತ್ಸಾ ವಿಧಾನಗಳನ್ನು ಗುರುತಿಸಲಾಗಿದೆ.<br><br>ತೃತೀಯ ಹಂತದ ಚಿಕಿತ್ಸಾ ವಿಧಾನಗಳನ್ನು ನೀಡಲು 435 ಖಾಸಗಿ ಆಸ್ಪತ್ರೆಗಳು ಹಾಗೂ 86 ಸರ್ಕಾರಿ ಆಸ್ಪತ್ರೆಗಳನ್ನು ಸದರಿ ಯೋಜನೆಯಡಿ ನೋಂದಾವಣೆ ಮಾಡಿಕೊಳ್ಳಲಾಗಿದೆ.<br><br>ತೃತೀಯ ಹಂತದ ಚಿಕಿತ್ಸೆಯನ್ನು ರೋಗಿಯು ಸರ್ಕಾರಿ ಅಥವಾ ಖಾಸಗಿ ಆಸ್ಪತ್ರೆಯಲ್ಲಿ ಪಡೆಯಬಹುದಾಗಿರುತ್ತದೆ. ರೋಗಿಯು ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿದಾಗ ಚಿಕಿತ್ಸೆ ಲಭ್ಯವಿಲ್ಲದಿದ್ದರೆ Online ಮೂಲಕ ರೆಫರಲ್ ಪತ್ರವನ್ನು ನೀಡಲಾಗುತ್ತದೆ.<br><br>ಸದರಿ ಯೋಜನೆಯ ಅನುಷ್ಠಾನದಿಂದ ಇಲ್ಲಿಯವರೆಗೆ **12,38,743** ಫಲಾನುಭವಿಗಳು ತೃತೀಯ ಹಂತದ ಚಿಕಿತ್ಸೆಯನ್ನು ಪಡೆದಿರುತ್ತಾರೆ. |

| | | |
|---|---|---|
| (ಈ) | ರಾಜ್ಯದಲ್ಲಿ ವಯಸ್ಸಿಗೆ ಅನುಗುಣವಾಗಿ ವೈದ್ಯಕೀಯ ಸೇವೆಗಳನ್ನು ಒದಗಿಸಲು ರಾಜ್ಯ ಮಟ್ಟದ ಕ್ರಿಯಾ ಯೋಜನೆ ಇದೆಯೇ? | ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿಯಲ್ಲಿ 6 ವರ್ಷದೊಳಗಿನ ಅಂಗನವಾಡಿ ಕೇಂದ್ರಗಳಲ್ಲಿನ ಮಕ್ಕಳು ಹಾಗೂ ಸರ್ಕಾರಿ/ಸರ್ಕಾರಿ ಅನುದಾನಿತ ಶಾಲಾ-ಕಾಲೇಜುಗಳಲ್ಲಿ 1 ರಿಂದ 12ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಉಚಿತವಾಗಿ ಆರೋಗ್ಯ ತಪಾಸಣೆಯನ್ನು ನಡೆಸಲು ರಾಜ್ಯದ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಆರ್‌ಬಿಎಸ್‌ಕೆ ಮೊಬೈಲ್ ಹೆಲ್ತ್ ತಂಡಗಳನ್ನು ರಚಿಸಲಾಗಿರುತ್ತದೆ. ತಂಡಗಳು ಅಂಗನವಾಡಿ ಕೇಂದ್ರಗಳು, ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿದ ಸಮಯದಲ್ಲಿ, ಕಾರ್ಯಕ್ರಮದಡಿಯಲ್ಲಿ ಗುರುತಿಸಲ್ಪಟ್ಟ ಆರೋಗ್ಯ ಸಮಸ್ಯೆಗಳ ನ್ಯೂನ್ಯತೆ ಕಂಡುಬಂದಂತಹ ಮಕ್ಕಳಿಗೆ ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ ಹಾಗೂ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನ ನೋಂದಾಯಿತ ಆಸ್ಪತ್ರೆಗಳಲ್ಲಿ ಉಚಿತವಾಗಿ ಆರೋಗ್ಯ ಸೇವೆಗಳನ್ನು ಒದಗಿಸಲಾಗುತ್ತದೆ.<br><br>ರಾಷ್ಟ್ರೀಯ ಕಿಶೋರ ಸ್ವಾಸ್ಥ್ಯ ಕಾರ್ಯಕ್ರಮದಡಿಯಲ್ಲಿ ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 'ಸ್ನೇಹ ಕ್ಲಿನಿಕ್'ಗಳನ್ನು ರಚಿಸಲಾಗಿದ್ದು, ಆಪ್ತ ಸಮಾಲೋಚಕರ ಮುಖಾಂತರ 10 ರಿಂದ 18 ವರ್ಷದ ವಯಸ್ಸಿನ ಹದಿಹರೆಯದವರಿಗೆ ಕೌನ್ಸಲಿಂಗ್ ಸೇವೆಗಳ ಜೊತೆಗೆ ಸಮುದಾಯ ಜಾಗೃತಿ ಚಟುವಟಿಕೆಗಳು, ಆರೋಗ್ಯ ಶಿಕ್ಷಣವನ್ನು ನೀಡಲಾಗುತ್ತದೆ.<br><br>ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 30 ವರ್ಷ ಮೇಲ್ಪಟ್ಟ ಪುರುಷ ಹಾಗೂ ಮಹಿಳೆಯರಿಗೆ ಅಧಿಕ ರಕ್ತದೊತ್ತಡ, ಮಧುಮೇಹ, 03 ಸಾಮಾನ್ಯ ಕ್ಯಾನ್ಸರ್‌ಗಳಾದ- ಬಾಯಿ, ಗರ್ಭಕಂಠದ ಮತ್ತು ಸ್ತನ ಕ್ಯಾನ್ಸರ್ ತಪಾಸಣೆ ಮತ್ತು ಚಿಕಿತ್ಸೆಗಳನ್ನು ಒಳಗೊಂಡಂತೆ ಒಟ್ಟು 14 ಅಸಾಂಕ್ರಾಮಿಕ ರೋಗಗಳಿಗೆ ಗೃಹ ಆರೋಗ್ಯ ಯೋಜನೆ ಮೂಲಕ ವೈದ್ಯಕೀಯ ಸೇವೆಯನ್ನು ಒದಗಿಸಲಾಗುತ್ತಿದೆ.<br><br>ಡಾ.ಪುನೀತ್ ರಾಜ್ ಕುಮಾರ್ ಹೃದಯ ಜ್ಯೋತಿ ಕಾರ್ಯಕ್ರಮದಡಿಯಲ್ಲಿ (STEMI ಕಾರ್ಯಕ್ರಮ) ಎಲ್ಲಾ ವಯಸ್ಸಿನವರಿಗೆ ಹೃದಯಕ್ಕೆ ಸಂಬಂದಿಸಿದ ಪ್ರಕರಣಗಳಿಗೆ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ವೈದ್ಯಕೀಯ ಸೇವೆಗಳನ್ನು ನೀಡಲಾಗುತ್ತಿದೆ.<br><br>ರಾಷ್ಟ್ರೀಯ ಡಯಾಲಿಸಿಸ್ ಕಾರ್ಯಕ್ರಮದಡಿಯಲ್ಲಿ ಎಲ್ಲಾ ವಯಸ್ಸಿನವರಿಗೆ ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಡಯಾಲಿಸಿಸ್ ಸೇವೆಗಳನ್ನು ಒದಗಿಸಲಾಗುತ್ತಿದೆ.<br><br>60 ವರ್ಷ ಮೇಲ್ಪಟ್ಟ ಪುರುಷ ಹಾಗೂ ಮಹಿಳೆಯರಿಗೆ ಹಿರಿಯ ನಾಗರೀಕರ ಆರೈಕೆ ಕಾರ್ಯಕ್ರಮದಡಿಯಲ್ಲಿ ಜಿಲ್ಲಾ ಆಸ್ಪತ್ರೆ, ತಾಲ್ಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಆಯುಷ್ಮಾನ್ ಆರೋಗ್ಯ ಕೇಂದ್ರಗಳಲ್ಲಿ ಹಾಗೂ ಗೃಹ ಆಧಾರಿತ ವೈದ್ಯಕೀಯ ಸೇವೆಗಳನ್ನು ಒದಗಿಸಲಾಗುತ್ತಿದೆ.<br><br>ಉಪಶಾಮಕ ಆರೈಕೆ ಕಾರ್ಯಕ್ರಮದಡಿಯಲ್ಲಿ ಎಲ್ಲಾ ವಯಸ್ಸಿನವರಿಗೆ ಜಿಲ್ಲಾಸ್ಪತ್ರೆ, ತಾಲ್ಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಆಯುಷ್ಮಾನ್ ಆರೋಗ್ಯ ಕೇಂದ್ರಗಳಲ್ಲಿ ಹಾಗೂ ಗೃಹ ಆಧಾರಿತ ವೈದ್ಯಕೀಯ ಸೇವೆಗಳನ್ನು ಒದಗಿಸಲಾಗುತ್ತಿದೆ. |

ಆಕುಕ 180 ಎಸ್ ಬಿವಿ 2025

**(ದಿನೇಶ್ ಗುಂಡೂರಾವ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ

ಅನುಬಂಧ -1

## ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಒಳಪಟ್ಟ ಜಿಲ್ಲಾ ಆಸ್ಪತ್ರೆಗಳು

| ಕ್ರಮ ಸಂಖ್ಯೆ | ಜಿಲ್ಲೆಯ ಹೆಸರು | ಜಿಲ್ಲಾ ಆಸ್ಪತ್ರೆ ಹೆಸರು |
|---|---|---|
| 1 | ಬಾಗಲಕೋಟೆ | ಜಿಲ್ಲಾ ಆಸ್ಪತ್ರೆ, ಬಾಗಲಕೋಟೆ |
| 2 | ಬಳ್ಳಾರಿ | ಜಿಲ್ಲಾ ಆಸ್ಪತ್ರೆ, ಬಳ್ಳಾರಿ |
| 3 | ಬೆಂಗಳೂರು ನಗರ ಪ್ರಮುಖ ಆಸ್ಪತ್ರೆಗಳು | ಕೆ.ಸಿ. ಜನರಲ್ ಆಸ್ಪತ್ರೆ,<br>ಸಾರ್ವಜನಿಕ ಆಸ್ಪತ್ರೆ, ಜಯನಗರ,<br>ಸರ್ ಸಿ ವಿ ರಾಮನ್ ಸಾರ್ವಜನಿಕ ಆಸ್ಪತ್ರೆ, ಇಂದಿರಾನಗರ. |
| 4 | ಚಿತ್ರದುರ್ಗ | ಜಿಲ್ಲಾ ಆಸ್ಪತ್ರೆ,ಚಿತ್ರದುರ್ಗ |
| 5 | ದಕ್ಷಿಣ ಕನ್ನಡ | ವೆನ್ ಲಾಕ್ ಜಿಲ್ಲಾ ಆಸ್ಪತ್ರೆ, ಮಂಗಳೂರು |
| 6 | ದಾವಣಗೆರೆ | ಚಿಗಟೇರಿ ಜಿಲ್ಲಾ ಆಸ್ಪತ್ರೆ, ದಾವಣಗೆರೆ |
| 7 | ಧಾರವಾಡ | ಜಿಲ್ಲಾ ಆಸ್ಪತ್ರೆ, ಧಾರವಾಡ |
| 8 | ಕೋಲಾರ | ಶ್ರೀ ನರಸಿಂಹ ರಾಜ ಜಿಲ್ಲಾ ಆಸ್ಪತ್ರೆ, ಕೋಲಾರ |
| 9 | ಮೈಸೂರು | ಜಿಲ್ಲಾ ಆಸ್ಪತ್ರೆ, ಮೈಸೂರು |
| 10 | ರಾಮನಗರ | ಜಿಲ್ಲಾ ಆಸ್ಪತ್ರೆ, ರಾಮನಗರ |
| 11 | ತುಮಕೂರು | ಜಿಲ್ಲಾ ಆಸ್ಪತ್ರೆ, ತುಮಕೂರು |
| 12 | ಉಡುಪಿ | ಜಿಲ್ಲಾ ಆಸ್ಪತ್ರೆ, ಉಡುಪಿ |
| 13 | ವಿಜಯಪುರ | ಜಿಲ್ಲಾ ಆಸ್ಪತ್ರೆ, ವಿಜಯಪುರ |

ಸಹ ನಿರ್ದೇಶಕರು (ವೈದ್ಯಕೀಯ),
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು,
ಬೆಂಗಳೂರು.